ದಿನಾಂಕ **: 06.03.2026** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

<u>ಪಾಟೀ ಸವಾಲುಃ</u> ಶ್ರೀಮತಿ ಎನ್.ಬಿ.ಎಸ್., 2 ನೇ ಎದುರುದಾರರ ಪರ ವಕೀಲರಿಂದಃ

ಅಪಘಾತವು ಸಂಜೆ 7.30 ರ ಸಮಯದಲ್ಲಿ ಆಗಿರುತ್ತದೆ. ಆಗ ಕತ್ತಲೆಯಾಗಿರುತ್ತದೆ ಎಂದರೆ ಸರಿ. ನಾನು, ನನ್ನ ಬಾವ ಆ ಸಮಯದಲ್ಲಿ ರಸ್ತೆಯಲ್ಲಿ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದೆವು. ಸದರಿ ಡಾಂಬಾರು ರಸ್ತೆಯ ಬದಿಯಲ್ಲಿ ಮಣ್ಣಿನ ರಸ್ತೆ ಇತ್ತು ಎಂದರೆ ಸರಿ. ಜನರು ಮಣ್ಣಿನ ರಸ್ತೆಯಲ್ಲಿ ಓಡಾಡುತ್ತಾರೆ ಎಂದರೆ ಸರಿ. ಅಪಘಾತವಾದ ರಸ್ತೆಯು ಕಾರ್ಕಳ - ಪಡುಬಿದ್ರಿ ರಾಜ್ಯ ಹೆದ್ದಾರಿ ಎಂದರೆ ಸರಿ. ಅಲ್ಲಿ ಸಾಕಷ್ಟು ವಾಹನಗಳು ಓಡಾಡುತ್ತದೆ ಎಂದರೆ ಸರಿ. ಕತ್ತಲೆಯಾದ ಕಾರಣ ಮತ್ತು ಡಾಂಬಾರು ರಸ್ತೆಯ ಮೇಲೆ ನಾವು ನಡೆದುಕೊಂಡು ಹೋಗುತ್ತಿದ್ದು, ನಮ್ಮ ತಪ್ಪಿ ನಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ನಾನು ಮಣ್ಣಿನ ರಸ್ತೆಯ ಮೇಲೆ ನಡೆದುಕೊಂಡು ಹೋಗುತ್ತಿದ್ದೆ ಎಂದು ನುಡಿಯುತ್ತೇನೆ. ಅಪಘಾತ ಯಾವ ಸ್ಥಳದಲ್ಲಿ ಆಗಿದೆ ಎಂದು ನಾನು ಪೋಲೀಸರಿಗೆ ತೋರಿಸಿದ್ದೇನೆ. ನಾನು ಹೇಳಿದ ಸ್ಥಳವನ್ನು ಪೋಲೀಸರು ಮಹಜರಿನಲ್ಲಿ ಸರಿಯಾಗಿ ನಮೂದಿಸಿದ್ದಾರೆ ಎಂದರೆ

ಸರಿ. ಈಗ ನನಗೆ ಮಹಜರು ಮತ್ತು ನಕಾಶೆಯನ್ನು ತೋರಿಸಿದ್ದು, ನನಗೆ ಸದರಿ ದಾಖಲೆಗಳು ಗೊತ್ತಾಗುವುದಿಲ್ಲ.

ಅಪಘಾತವಾದ ನಂತರ ನಾನು ಉಡುಪಿಯ ಆಸ್ಪತ್ರೆಗೆ ಹೋಗಿರುತ್ತೇನೆ. ಸದರಿ ಆಸ್ಪತ್ರೆ ಯಾವುದು ಮತ್ತು ಅಲ್ಲಿ ಎಷ್ಟು ದಿನ ಇದ್ದೆ ಎಂದು ನನಗೆ ಈಗ ನೆನಪಿಲ್ಲ. ಅಲ್ಲಿ ಎಷ್ಟು ಖರ್ಚಾಗಿದೆ ಎಂದು ನನಗೆ ತಿಳಿದಿಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳಿಗೂ ಮತ್ತು ಅಪಘಾತಕ್ಕೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಹಾಗೆ ಸಂಬಂಧ ಇಲ್ಲದ ಕಾರಣ ನಾನು ಪರಿಹಾರಕ್ಕೆ ಅರ್ಹಳಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳು ಅಪಘಾತಕ್ಕೆ ಸಂಬಂಧಿಸಿರುವುದಿಲ್ಲ ಮತ್ತು ಅವುಗಳನ್ನು ಪರಿಹಾರ ಪಡೆಯುವ ಉದ್ದೇಶದಿಂದ ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

ನಾನು ಮಲ್ಲಿಗೆ ಕೃಷಿ ಮಾಡುತ್ತಿದ್ದೆ. ಅದರ ಬಗ್ಗೆ ದಾಖಲೆ ಹಾಜರುಪಡಿಸಬಹುದು. ನಾನು ಈಗಲೂ ಅದೇ ಕೆಲಸ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಈಗ ಮೊದಲಿನಂತೆ ಕೆಲಸ ಮಾಡಲು ಆಗುವುದಿಲ್ಲ. ನನ್ನ ವಯಸ್ಸಿನ ಕಾರಣದಿಂದ ಇರುವಂತಹ ದೈಹಿಕ ನ್ಯೂನತೆಗಳಿಂದ ನನಗೆ ತೊಂದರೆಯಾಗುತ್ತಿದ್ದು, ಪರಿಹಾರ ಪಡೆಯುವ ಉದ್ದೇಶದಿಂದ ಅಪಘಾತದಿಂದ ಹಾಗೆ ಆಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಂಗನ್ಯೂನ್ಯತಾ ಪ್ರಮಾಣ ಪತ್ರವನ್ನು ನೀಡಲು ವೈದ್ಯರು ಯಾವ ಯಾವ ಪರೀಕ್ಷೆಗಳನ್ನು

ಮಾಡಿದ್ದಾರೆ ಎಂದು ನನಗೆ ತಿಳಿದಿಲ್ಲ. ನನಗೆ ಯಾವುದೇ ಪರೀಕ್ಷೆ ಮಾಡದೇ ಅಂಗನ್ಯೂನ್ಯತಾ ಪ್ರಮಾಣ ಪತ್ರವನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ಅಂಗನ್ಯೂನ್ಯತಾ ಪ್ರಮಾಣಪತ್ರಕ್ಕೂ ಹಾಗೂ ಅಪಘಾತಕ್ಕೂ ಯಾವುದೇ ಸಂಬಂಧ ಇರದ ಕಾರಣ, ನಾನು ಅದರ ಪ್ರಕಾರವಾಗಿ ಪರಿಹಾರ ಪಡೆಯಲು ಅರ್ಹಳಲ್ಲ ಎಂದರೆ ಸರಿಯಲ್ಲ.

ನಾನು ವಾಹನ ಬಾಡಿಗೆಗಾಗಲೀ, ಪೌಷ್ಟಿಕ ಆಹಾರಕ್ಕಾಗಲೀ, ಪರಿಚಾರಕರ ಭತ್ಯೆಗಾಗಲೀ ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ಶಾಶ್ವತ ಅಂಗನ್ಯೂನತೆ ಆಗಿಲ್ಲ ಎಂದರೆ ಸರಿಯಲ್ಲ. ನನಗೆ ಭವಿಷ್ಯದ ಚಿಕಿತ್ಸೆಯ ಅಗತ್ಯ ಇಲ್ಲ ಎಂದರೆ ಸರಿಯಲ್ಲ. ನಾನು ಹೇಳಿದಷ್ಟು ನಾನು ವೈದ್ಯಕೀಯ ಚಿಕಿತ್ಸೆಗೆ ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನನಗೆ ಯಾವುದೇ ಆದಾಯ ನಷ್ಟ ಆಗಿಲ್ಲ ಎಂದರೆ ಸರಿಯಲ್ಲ. ನಾನು ಈಗಲೂ ಮೊದಲಿನಂತೆ ಕೆಲಸ ಮಾಡಲು ಶಕ್ತಳಾಗಿದ್ದೇನೆ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದ ಅಪಘಾತವಾಗಿರುವ ಕಾರಣ 2 ನೇ ಎದುರುದಾರರು ನನಗೆ ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,
ಕಾರ್ಕಳ.